Bruhat Bengaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
# ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
# ವಾರ್ಡ್ ಸಮಿತಿ ಸಭೆ ದಿನಾಂಕ: 04/12/2021ರ
# ಸಭಾ ನಡವಳಿ

ಸಕಾಅ/ಕೆಂಉವಿ/ವಾರ್ಡ್ ಕಮಿಟಿ-ಸಭೆ -12/2021-22 ದಿನಾಂಕ: 04.12.2021

ದಿನಾಂಕ: 04.12.2021 ರಂದು ಬೆಳಿಗ್ಗೆ 10.30 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ಹಾಜರಿದ್ದವರು:

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಕಾರ್ಯಪಾಲಕ ಅಭಿಯಂತರರು, ಉಪ ನಿರ್ದೇಶಕರ ಕಛೇರಿ ಕಟ್ಟಡ ಪರವಾನಗೆ ಕೋಶ-ಉತ್ತರ |
| 2 | ಶ್ರೀ ದಯಾನಂದ.ಎನ್ | ಸಹಾಯಕ ಅಭಿಯಂತರರು, ವಾರ್ಡ್-198, ಹೆಮ್ಮಿಗೆಪುರ |
| 3 | ಶ್ರೀ ರವಿಚಂದ್ರಚಾರಿ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.198, ಹೆಮ್ಮಿಗೆಪುರ |
| 4 | ಶ್ರೀಮತಿ ಮೋನಿಕ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.198, ಹೆಮ್ಮಿಗೆಪುರ |
| 5 | ಶ್ರೀ ಸಿ.ವಿ. ಸೂರ್ಯನಾರಾಯಣ | ಜಲ ಪರಿವೀಕ್ಷಕರು ಬೆಂಗಳೂರು ಜಲ ಮಂಡಳಿ |
| 6 | ಶ್ರೀ ಕೃಷ್ಣನಾಯಕ್ | ಕೆಲಸಪರಿವೀಕ್ಷಕರು ವಾರ್ಡ್ ನಂ.198, ಬಿಬಿಎಂಪಿ |

ಶ್ರೀ ದಯಾನಂದ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಭಾಗವಹಿಸಿದ್ದ ಎಲ್ಲರನ್ನೂ ಸ್ವಾಗತಿಸುವ ಮೂಲಕ ಸಭೆಯನ್ನು



Scanned with CamScanner

ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

- **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-** ಅಧ್ಯಕ್ಷರು, ಕೋವಿಡ್-19ರ ಸಾಂಕ್ರಾಮಿಕ ರೋಗದ ಬಗ್ಗೆ ಹಾಗೂ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು ಹಾಗೂ ಕೋವಿಡ್ ಪರಿವೀಕ್ಷಣೆಯಿಂದ ಮೊದಲುಗೊಂಡು ಆಸ್ಪತ್ರೆಗೆ ದಾಖಲಾಗುವವರೆಗೆ ಮತ್ತು ಕೋವಿಡ್-19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್-19ರ ಪರೀಕ್ಷೆಯನ್ನು ಹೆಚ್ಚು ಮಾಡುವ ಬಗ್ಗೆ ಸಹಕರಿಸುವಂತೆ ಸಭೆಯಲ್ಲಿದ್ದ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರುಗಳು ಮತ್ತು ಅಧಿಕಾರಿ ವರ್ಗದವರಿಗೆ ವಿನಂತಿಸಿ, ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳು ಸದರಿಯವರನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸೂಚಿಸಿದರು ಮತ್ತು ಮಾಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸದೇ ಇರುವವರಿಗೆ ದಂಡವನ್ನು ವಿಧಿಸಲು ಸೂಚಿಸಲಾಯಿತು ಹಾಗೂ ಕೋವಿಡ್-19 ವ್ಯಾಕ್ಸಿನ್ ಲಸಿಕೆಗಳನ್ನು ನೀಡುತ್ತಿರುವ ಸ್ಥಳ ವಿವರಗಳನ್ನು ಸಭೆಗೆ ತಿಳಿಸಲಾಯಿತು ಹಾಗೂ ಇತ್ತಿಗೆ ಕೋವಿಡ್‌ನ ರೂಪಾಂತರಿಯಾದ "ಓಮ್ಯೆಕ್ರಾನ್" ವೈರಾಣು ಬೆಂಗಳೂರಿನಲ್ಲಿ ಪತ್ತೆಯಾಗಿದ್ದು, ಕೋವಿಡ್ ಸುರಕ್ಷತಾ ನಿಯಮಾವಳಿಯನ್ನು ತಪ್ಪದೇ ಪಾಲಿಸಲು ಸಭೆಯಲ್ಲಿ ಹಾಜರಿದ್ದ ಎಲ್ಲಾ ನಿವಾಸಿಗಳಿಗೆ ಹಾಗೂ ಬಡಾವಣೆಯ ಪ್ರತಿನಿಧಿಗಳಿಗೆ ತಿಳಿಸಲಾಯಿತು ಮತ್ತು ಕೋವಿಡ್ ಲಸಿಗಳ ಇದರ ಸದುಪಯೋಗ ಪಡೆಯಲು ಭಾಗವಹಿಸಿದ್ದ ಎಲ್ಲರಿಗೂ ಕೋರಲಾಯಿತು.

- **ಘನತ್ಯಾಜ್ಯ ನಿರ್ವಹಣೆ ಬಗ್ಗೆ:-** ವಾರ್ಡ್ ನಂ.198ರಲ್ಲಿ ಇರುವ ಖಾಲಿ ನಿವೇಶನಗಳಲ್ಲಿ ಘನತ್ಯಾಜ್ಯವನ್ನು ಎಸೆಯುತ್ತಿರುವ ಬಗ್ಗೆ ಮತ್ತು ಗಿಡಗಳು ಬೆಳೆದು ನಿಂತಿರುವ ಬಗ್ಗೆ ಹಾಗೂ ಇದರಿಂದ ಅಲ್ಲಿನ ಸ್ಥಳಿಯ ನಿವಾಸಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ವಾರ್ಡ್ ನಂ.198ರಲ್ಲಿ ಘನತ್ಯಾಜ್ಯ ವಿಲೇವಾರಿ ಕಾರ್ಯ ನಿರ್ವಹಿಸುತ್ತಿರುವ ಸರಬರಾಜುದಾರರಾದ ಮೆ॥ ಕ್ಲೀನ್‌ಟೆಕ್ ಹಾಗೂ ಶ್ರೀ ಸಿದ್ಧಿ ವಿನಾಯಕ ಪ್ರಸನ್ನ ರವರುಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲವೆಂದು ವಾರ್ಡ್ ಕಮಿಟಿ ಸಮಿತಿ ಸದಸ್ಯರು ಸಭೆಯ ಗಮನಕ್ಕೆ ತರಲಾಗಿರುತ್ತದೆ ಹಾಗೂ ಸದರಿ ಸರಬರಾಜುದಾರರು ವಾಹನಗಳಿಗೆ ಕೆಲವೊಂದು ಜಿ.ಪಿ.ಎಸ್. ಅಳವಡಿಸಿರುವುದಿಲ್ಲ ಇದರ ಬಗ್ಗೆ ಮೌಖಿಕವಾಗಿ ಹಾಗೂ ನೋಟೀಸ್ ಮುಖೇನ ತಿಳಿಸಿದ್ದರೂ ಯಾವುದೇ ರೀತಿ ಕ್ರಮಕೈಗೊಂಡಿರುವುದಿಲ್ಲ ಮತ್ತು ಆಟೋ ಹೆಲ್ಪರ್‌ಗಳಿಗೆ ಕೆಲವೊಂದು ತಿಂಗಳುಗಳು ಪಿ.ಎಫ್. ವಂತಿಕೆಯನ್ನು ಪಾವತಿಸಿರುವುದಿಲ್ಲ. ಆದುದರಿಂದ ಸರಬರಾಜುದಾರರನ್ನು ಬದಲಾಯಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

- **ವಿದ್ಯುತ್ ಬೀದಿ ದೀಪಗಳ ನಿರ್ವಹಣೆ:-** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ಹೊಸ ವಿದ್ಯುತ್ ದೀಪವನ್ನು ಅಳವಡಿಸಲು ಕೋರಲಾಯಿತು. ಈ ಸಂಬಂಧ ನೋಡಲ್



Scanned with CamScanner

ಅಧಿಕಾರಿಯವರು ದೂರವಾಣಿ ಮೂಲಕ ಮಾತನಾಡಿ ಬೀದಿ ದೀಪ ನಿರ್ವಹಣೆಯ ಗುತ್ತಿಗೆದಾರರಿಗೆ ತಕ್ಷಣ ದೂರುಗಳಿಗೆ ಸಂಬಂಧಿಸಿ ದುರಸ್ಥಿ ಕಾರ್ಯವನ್ನು ಯಾವುದೇ ವಿಳಂಬವಿಲ್ಲದೇ ಕೈಗೊಳ್ಳಲು ಸೂಚಿಸಿದರು.

❖ **ಬೆಂಗಳೂರು ವಿದ್ಯುತ್ ಸರಬರಾಜು ನಿಗಮ:-** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಾಜರಹಳ್ಳಿ ಬಾಲಾಜಿ ಬಡಾವಣೆಯಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗುತ್ತಿದ್ದು, ಸಮರ್ಪಕವಾಗಿ ವಿದ್ಯುತ್ ಪೂರೈಸಲು ಸಭೆಗೆ ಕೋರಲಾಯಿತು. ಈ ಸಂಬಂಧ ಸಹಾಯಕ ಅಭಿಯಂತರರು ಮಾತನಾಡಿ ಬೆಸ್ಕಾಂ ಅಧಿಕಾರಿಗಳೊಂದಿಗೆ ಮಾತನಾಡಿ ಸದರಿ ಸಮಸ್ಯೆಯನ್ನು ಬಗೆಹರಿಸಲು ಕೋರಲಾಗುವುದೆಂದು ಸಭೆಗೆ ತಿಳಿಸಿದರು.

❖ **ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ** :- 1) ವಾರ್ಡ್ ನಂ.198ರಲ್ಲಿ ಬರುವ ಕೆಂಚೇನಹಳ್ಳಿ ಮುಖ್ಯರಸ್ತೆಯ ಮಣಿಪಾಲ್ ಹಾಸ್ಪಿಟಲ್ ಹತ್ತಿರವಿರುವ ಸಾಯಿ ವಿಹಾರ್ ವಸತಿ ಸಮುಚ್ಚಯದ ಹತ್ತಿರ ಬಿ.ಎಂ.ಟಿ.ಸಿ. ಬಸ್ ನಿಲುಗಡೆ ಮಾಡಿಸಿಕೊಡಬೇಕೆಂದು ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಸಂಬಂಧಿಸಿದ ಸಾರಿಗೆ ಸಂಸ್ಥೆಯ ಕಛೇರಿಗೆ ಮನವಿಯನ್ನು ಸಲ್ಲಿಸಲು ಕೋರಲಾಯಿತು.

2) ವಾರ್ಡ್ ನಂ.198ರಲ್ಲಿ ಬರುವ ಕೆಂಚೇನಹಳ್ಳಿ ಮುಖ್ಯರಸ್ತೆಯ ಮಣಿಪಾಲ್ ಹಾಸ್ಪಿಟಲ್ ಹತ್ತಿರವಿರುವ ಸಾಯಿ ವಿಹಾರ್ ವಸತಿ ಸಮುಚ್ಚಯದ ಒಳ ಬರುವ ಹಾಗೂ ಹೊರಹೋಗುವ ಗೇಟುಗಳು ನಿಗಧಿತ ಸ್ಥಳದಲ್ಲಿ ಇಲ್ಲದಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ರಾಜರಾಜೇಶ್ವರಿನಗರ ವಲಯದ ನಗರ ಯೋಜನೆ ಸಹಾಯಕ ನಿರ್ದೇಶಕರ ಕಛೇರಿಯಲ್ಲಿ ಪರಿಶೀಲಿಸಿ ಕ್ರಮ ಕೈಗೊಳ್ಳಲು ಸೂಚಿಸುವುದಾಗಿ ಸಭೆಗೆ ತಿಳಿಸಿದರು.

3) ವಾರ್ಡ್ ನಂ.198ರಲ್ಲಿ ಬರುವ ನಂ.12, ತಲಘಟ್ಟಪುರ ಗ್ರಾಮ, ಕನಕಪುರ ಮುಖ್ಯರಸ್ತೆ, ತಲಘಟ್ಟಪುರ ಬೆಂಗಳೂರು. ಇಲ್ಲಿ ಶ್ರೀ ಗುರಪ್ಪ ಬಿನ್ ಪುಟ್ಟೇಗೌಡ ರವರಿಗೆ ದಿನಾಂಕ: 06/07/2019ರಂದು ನಡೆದ ವಾರ್ಡ್ ಕಮಿಟಿ ಸಭೆಯಲ್ಲಿ ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ಫಲಾನುಭವಿಗಳ ಅನುದಾನದಡಿ 2019-20ನೇ ಸಾಲಿನ ಆಯವ್ಯಯದಲ್ಲಿ ಒಂಟಿ ಮನೆ (ವೈಯಕ್ತಿಕ ಮನೆ) ನಿರ್ಮಿಸಲು ಸಭೆಯಲ್ಲಿ ಅನುಮೋದನೆ ದೊರೆತು ಜಾಬ್‌ಕೋಡ್ ಸಂಖ್ಯೆ: 198-20-000061 ರಂತೆ ಶ್ರೀ ಗುರಪ್ಪ ಬಿನ್ ಪುಟ್ಟೇಗೌಡ ರವರ ಹೆಸರಿಗೆ ಕಮಗಾರಿ ಸಂಖ್ಯೆ ಪ್ರಮಾಣ ಪತ್ರ ಮಂಜೂರಾಗಿದ್ದು, ಆದರೆ ಸದರಿ ಫಲಾನುಭವಿಯವರು ಮೃತಪಟ್ಟಿದ್ದು, ಈ ಸಂಬಂಧ ಶ್ರೀ ಗುರಪ್ಪ ರವರ ಧರ್ಮಪತ್ನಿಯಾದ ಶ್ರೀಮತಿ ಚಿಕ್ಕತಾಯಮ್ಮ ರವರು ವೈಯಕ್ತಿಕ ಮನೆ ನಿರ್ಮಾಣ ಮಾಡಲು ಅವರ ಹೆಸರಿಗೆ ಖಾತಾ ವರ್ಗಾವಣೆಯೊಂದಿಗೆ ಮನವಿಯನ್ನು ಸಲ್ಲಿಸಿದ್ದು, ಅವರ ಹೆಸರಿಗೆ ಒಂಟಿ ಮನೆ ನಿರ್ಮಾಣದ ಕಾರ್ಯಾದೇಶವನ್ನು ನೀಡಲು ಕೋರಿದ್ದು, ಈ ಸಂಬಂಧ



Scanned with CamScanner

ಪರಿಶೀಲಿಸಲಾಗಿ ಶ್ರೀಮತಿ ಚಿಕ್ಕತಾಯಮ್ಮ ಕೋಂ ಲೇ॥ ಗುರಪ್ಪ ರವರ ಹೆಸರಿಗೆ ಕಾರ್ಯಾದೇಶವನ್ನು ನೀಡಲು ಹಾಗೂ ಅನುದಾನವನ್ನು ಹಂತ ಹಂತವಾಗಿ ಬಿಡುಗಡೆ ಮಾಡಲು ಸಂಬಂಧಿಸಿದ ಇಲಾಖೆಗೆ ಕೋರಲು ಸಭೆಯಲ್ಲಿ ತೀರ್ಮಾನಿಸಲಾಯಿತು.

(ದಯಾನಂದ.ಎನ್)
ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್–198, ಹೆಮ್ಮಿಗೆಪುರ

(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ
ವಾರ್ಡ್–198, ಹೆಮ್ಮಿಗೆಪುರ

ಪ್ರತಿಯನ್ನು:-

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.
2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಕಳುಹಿಸಿದೆ.
8) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
10) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
12) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
13) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
14) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
15) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
16) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.



Scanned with CamScanner